ಅ) ಮತ್ತು ಆ) ವಿದ್ಯಾರ್ಥಿಗಳ ಶೈಕ್ಷಣಿಕ ಪಾಠ–ಪ್ರವಚನಕ್ಕೆ ಆಗುತ್ತಿರುವ ತೊಡಕನ್ನು ನಿವಾರಿಸಲು ವಿವಿಧ ವಿಷಯಗಳ ಒಟ್ಟು 1130 ಅತಿಥಿ ಉಪನ್ಯಾಸಕರುಗಳನ್ನು ನೇಮಕ ಮಾಡಿಕೊಳ್ಳಲು ಸರ್ಕಾರದ ಆದೇಶ ಸಂಖ್ಯೆ : ಇಡಿ 194 ಎಸ್‌ಟಿಬಿ 2013 ದಿನಾಂಕ: 13–06–2014ರಲ್ಲಿ ಅವಕಾಶ ಕಲ್ಪಿಸಲಾಗಿದೆ. ಅದರಂತೆ ಅತಿಥಿ ಉಪನ್ಯಾಸಕರುಗಳನ್ನು ನೇಮಕಾತಿ ಮಾಡಿಕೊಳ್ಳಲು ಕ್ರಮವಹಿಸಲಾಗುತ್ತಿದೆ.

ಇ) ಮತ್ತು ಈ) ಹಾಲಿ ಮಾರುಕಟ್ಟೆಯಲ್ಲಿ ಶೇ. 60 ರಷ್ಟು ಪಠ್ಯಪುಸ್ತಕಗಳು ಲಭ್ಯವಿದ್ದು, ಎಲ್ಲಾ ಜಿಲ್ಲೆಗಳಲ್ಲೂ ಜಿಲ್ಲಾ ವಿತರಕರ ವಿಳಾಸವನ್ನು ಪದವಿ ಪೂರ್ವ ಶಿಕ್ಷಣ ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಿದೆ ಮತ್ತು ತ್ವರಿತವಾಗಿ ಪುಸ್ತಕಗಳನ್ನು ಮುದ್ರಿಸಿ ಕೊರತೆಯಾಗದಂತೆ ಕ್ರಮವಹಿಸಲು ಕರ್ನಾಟಕ ಪಠ್ಯ ಪುಸ್ತಕ ಸಂಘಕ್ಕೆ ತಿಳಿಸಲಾಗಿದೆ.

ಬೋಧನಾ ಶುಲ್ಕ

165(326) ಶ್ರೀ ರುದ್ರಪ್ಪ ಮಾನಪ್ಪ ಲಮಾಣಿ (ಹಾವೇರಿ):– ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ :–

ಅ) ಅನುದಾನಿತ ಪದವಿ ಕಾಲೇಜುಗಳಲ್ಲಿ ಆದಾಯ ಪ್ರಮಾಣ ಪತ್ರ ನೀಡಿದ ವಿದ್ಯಾರ್ಥಿಗಳಿಗೆ ಒಟ್ಟು ಬೋಧನಾ ಶುಲ್ಕದ ಅರ್ಧದಷ್ಟು ಬೋಧನಾ ಶುಲ್ಕವನ್ನು ಸಂಬಂಧಪಟ್ಟ ಕಾಲೇಜುಗಳಿಗೆ ಮರು ಪಾವತಿ ಮಾಡುತ್ತಿದ್ದು, ಅನುದಾನ ರಹಿತ ಕಾಲೇಜುಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೂ ಕೇವಲ ಅರ್ಧದಷ್ಟು ಬೋಧನಾ ಶುಲ್ಕ ಮರುಪಾವತಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಅನುದಾನ ರಹಿತ ಪದವಿ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಕಡಿಮೆ ಆದಾಯದ ಪ್ರಮಾಣ ಪತ್ರ ನೀಡಿರುವ ವಿದ್ಯಾರ್ಥಿಗಳ ಪೂರ್ಣ ಬೋಧನಾ ಶುಲ್ಕವನ್ನು ಆಯಾ ಕಾಲೇಜುಗಳಿಗೆ ಮರು ಪಾವತಿ ಮಾಡಲು ಸರ್ಕಾರ ಕ್ರಮಕೈಗೊಳ್ಳುವುದೇ ?

ಶ್ರೀ ಆರ್.ವಿ. ದೇಶಪಾಂಡೆ (ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು):–

ಅ) ಇಲ್ಲ

ಆ) ಅನ್ವಯಿಸುವುದಿಲ್ಲ

ತರೀಕೆರೆ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಮಂಜೂರಾತಿ

166(273) ಶ್ರೀ ಶ್ರೀನಿವಾಸ್ ಜಿ.ಎಚ್. (ತರೀಕೆರೆ) :– ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ :–

ಅ) ತರೀಕೆರೆ ಮತಕ್ಷೇತ್ರಕ್ಕೆ ಹೊಸ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

ಆ) ಹಾಗಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿಯೇ ಮಂಜೂರು ಮಾಡಲಾಗುವುದೇ ; ಇದಕ್ಕಾಗಿ ನಿಗದಿಪಡಿಸಬಹುದಾದ ಅನುದಾನದ ಮೊತ್ತವೆಷ್ಟು ?

ಶ್ರೀ ಆರ್.ವಿ. ದೇಶಪಾಂಡೆ (ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು):–

ಅ) ಇದೆ.

ಆ) ಇಲ್ಲ, ಪರಿಶೀಲಿಸಲಾಗುತ್ತಿದೆ.

ವಿಕಲಚೇತನರ ಸಬಲೀಕರಣಕ್ಕೆ ಯೋಜನೆಗಳು

167(274) ಶ್ರೀ ಶ್ರೀನಿವಾಸ್ ಜಿ.ಎಚ್. (ತರೀಕೆರೆ) :– ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ :–

ಅ) ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಇಲಾಖೆಯಲ್ಲಿರುವ ವಿವಿಧ ಯೋಜನೆಗಳು ಯಾವುವು ; (ವಿವರ ನೀಡುವುದು)

ಆ) ತರೀಕೆರೆ ತಾಲ್ಲೂಕಿನಲ್ಲಿರುವ ವಿಕಲಚೇತನರುಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

ಇ) ಕಳೆದ ಮೂರು ವರ್ಷಗಳಿಂದ ತರೀಕೆರೆ ತಾಲ್ಲೂಕಿನಲ್ಲಿ ಸರ್ಕಾರದ ವಿವಿಧ ಯೋಜನೆಗಳ ಲಾಭ ಪಡೆದ ವಿಕಲಚೇತನರುಗಳ ಸಂಖ್ಯೆ ಎಷ್ಟು ? (ವಿಳಾಸದೊಂದಿಗೆ ವರ್ಷವಾರು, ಯೋಜನೆವಾರು ಪೂರ್ಣ ವಿವರ ನೀಡುವುದು)

ಶ್ರೀಮತಿ ಉಮಾಶ್ರೀ (ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು) :–

ಅ) ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಇಲಾಖೆಯು ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

1. ವಿಕಲಚೇತನರ ಸ್ವಯಂ ಉದ್ಯೋಗ ಆಧಾರ ಯೋಜನೆ
2. ವಿಕಲಚೇತನರ ಸಾಧನ ಸಲಕರಣೆ ಯೋಜನೆ
3. ವಿಕಲಚೇತನರ ಗ್ರಾಮೀಣ ಪುನರ್ವಸತಿ ಯೋಜನೆ